# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 59 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ. ಪಿ ಸುಜಾ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕೊಡಗು ಜಿಲ್ಲೆಯಲ್ಲಿ ಒಟ್ಟು ಎಷ್ಟು ಎಪಿಎಲ್ ಮತ್ತು ಬಿಪಿಎಲ್ ಕಾರ್ಡುಗಳು ಚಾಲ್ತಿಯಲ್ಲಿವೆ: (ವಿವರ ನೀಡುವುದು)</td><td>ಕೊಡಗು ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿರುತ್ತದೆ.
<table>
<tr><th></th><th>ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿ</th><th>ಆದ್ಯತಾ ಪಡಿತರ ಚೀಟಿ</th><th>ಪಡಿತರ ಚೀಟಿ</th><th>ಒಟ್ಟು</th></tr>
<tr><td>ಪಡಿತರ ಚೀಟಿಗಳು</td><td>9432</td><td>100379</td><td>37822</td><td>147633</td></tr>
<tr><td>ಫಲಾನುಭವಿಗಳು</td><td>30629</td><td>304421</td><td>102690</td><td>437740</td></tr>
</table></td></tr>
<tr><td>ಆ</td><td>ಸದರಿ ಜಿಲ್ಲೆಯಲ್ಲಿ ಹೊಸದಾಗಿ ಎಷ್ಟು ಎಪಿಎಲ್ ಮತ್ತು ಬಿಪಿಎಲ್ ಕಾರ್ಡುಗಳನ್ನು ನೀಡುವ ಗುರಿ ಸರ್ಕಾರದ ಮುಂದಿದೆ;</td><td>ದಿನಾಂಕ:29.11.2024 ರ ಅಂತ್ಯಕ್ಕೆ ಕೊಡಗು ಜಿಲ್ಲೆಯಲ್ಲಿ ಒಟ್ಟು 1108 ಆದ್ಯತಾ ಪಡಿತರ ಚೀಟಿ ಕೋರಿ ಅರ್ಜಿಗಳು ಬಾಕಿ ಇರುತ್ತವೆ. ಅರ್ಜಿಗಳ ಹಿರಿತನದ ಆಧಾರದ ಮೇಲೆ ಸದರಿ ಅರ್ಜಿಗಳನ್ನು ವಿಲೇವಾರಿ ಮಾಡಲು ಕ್ರಮವಹಿಸಲಾಗುತ್ತದೆ.</td></tr>
<tr><td>ಇ</td><td>ಎಪಿಎಲ್ ಮತ್ತು ಬಿಪಿಎಲ್ ಕಾರ್ಡ್ ಗಳನ್ನು ವಿತರಿಸಬೇಕಾದರೆ ಅನುಸರಿಸುವ ಮಾನದಂಡಗಳೇನು:</td><td>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ. ವಿವರ ಈ ಕೆಳಕಂಡಂತಿರುತ್ತದೆ.<br>• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.</td></tr>
</table>

<table>
<tr>
<td></td>
<td></td>
<td>• ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಆದ್ಯತೇತರ ಪಡಿತರ ಚೀಟಿ ಪಡೆಯಲು ಯಾವುದೇ ಮಾನದಂಡ ನಿಗಧಿಪಡಿಸಿರುವುದಿಲ್ಲ.</td>
</tr>
<tr>
<td>ಈ</td>
<td>ಈ ಜಿಲ್ಲೆಯಲ್ಲಿ ಎಷ್ಟು ಬಿಪಿಎಲ್ ಮತ್ತು ಎಪಿಎಲ್ ಕಾರ್ಡ್‌ಗಳಿಗೆ ಮಾನದಂಡಗಳನ್ನು ಅನುಸರಿಸಿ ವರ್ಗಾಯಿಸಲ್ಪಟ್ಟಿದೆ?<br>(ತಾಲ್ಲೂಕುವಾರು ಮಾಹಿತಿ ನೀಡುವುದು)</td>
<td>ಆದ್ಯತೇತರ (ಎಪಿಎಲ್) ಪಡಿತರ ಚೀಟಿಗೆ ವರ್ಗಾಯಿಸಲಾದ ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ತಾಲ್ಲೂಕಿನ ಹೆಸರು</th><th>ಸರ್ಕಾರಿ ನೌಕರರನ್ನು ಅವಲಂಬಿತ ಕುಟುಂಬದ ಪಡಿತರ ಚೀಟಿಯನ್ನು ಎಪಿಎಲ್ ಪಡಿತರ ಚೀಟಿಗೆ ವರ್ಗಾಯಿಸಿರುವ ಸಂಖ್ಯೆ:</th></tr>
<tr><td></td><td>ಮಡಿಕೇರಿ</td><td>11</td></tr>
<tr><td></td><td>ಸೋಮವಾರಪೇಟೆ</td><td>02</td></tr>
<tr><td></td><td>ವಿರಾಜಪೇಟೆ</td><td>08</td></tr>
<tr><td></td><td>ಕುಶಾಲನಗರ</td><td>03</td></tr>
<tr><td></td><td>ಪೊನ್ನಂಪೇಟೆ</td><td>03</td></tr>
<tr><td></td><td>ಒಟ್ಟು</td><td>27</td></tr>
</table>
</td>
</tr>
</table>

ಅನಾಸ 356 ಡಿಆರ್‌ಎ 2024

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು